# All India Radio: Bangalore
# Regional Bulletin In Kannada
# 29.05.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಅಂಗೀಕಾರ - ಹಂಗಾಮಿ ಮುಖ್ಯಮಂತ್ರಿಯಾಗಿ ಮುಂದುವರಿಯುವಂತೆ ರಾಜ್ಯಪಾಲರ ಸೂಚನೆ
2. ನಾಳೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ
3. ನವದೆಹಲಿಯಲ್ಲಿ ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸಿದ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ - ಡಿ.ಕೆ.ಶಿವಕುಮಾರ್ ಅವರೊಂದಿಗೂ ಚರ್ಚೆ
4. ದಾವಣಗೆರೆಯ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿದ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
5. ಭಟ್ಕಳದ ಕಪ್ಪೆಚಿಪ್ಪು ದುರಂತ ಪ್ರಕರಣ : ಮೃತಪಟ್ಟವರ ಕುಟುಂಬಕ್ಕೆ ಮಾಜಿ ಸಚಿವ ಮಂಕಾಳ ವೈದ್ಯ ಪರಿಹಾರ ವಿತರಣೆ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಯನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಂಗೀಕರಿಸಿದ್ದು, ಲೋಕಭವನದಿಂದ ಅಧಿಕೃತ ಆದೇಶ ಹೊರಬಿದ್ದಿದೆ. ರಾಜ್ಯ ಸಚಿವ ಸಂಪುಟ ವಿಸರ್ಜನೆಗೊಂಡಿರುವ ಬಗ್ಗೆ ಗೆಜೆಟ್ ಅಧಿಸೂಚನೆ ಪ್ರಕಟವಾಗಿದೆ. ಇದೇ ವೇಳೆ ಹೊಸ ಸರ್ಕಾರ ರಚನೆಯಾಗುವವರೆಗೆ ಇನ್ನು ಎರಡು-ಮೂರು ದಿನಗಳ ಕಾಲ ಸಿದ್ದರಾಮಯ್ಯ ಅವರು, ಹಂಗಾಮಿ ಮುಖ್ಯಮಂತ್ರಿ ಆಗಿ ಮುಂದುವರೆಯುವಂತೆ ರಾಜ್ಯಪಾಲರು ಸೂಚನೆ ನೀಡಿದ್ದಾರೆ. ರಾಜ್ಯಪಾಲರ ಅನುಪಸ್ಥಿತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಿನ್ನೆ ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ಹಸ್ತಾಂತರಿಸಿದ್ದರು.

<><><><>

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಾಳೆ ಸಂಜೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದಾರೆ. ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ವಿಧಾನಪರಿಷತ್ತಿನಲ್ಲಿ ಸಭಾ ನಾಯಕರಾದ ಎನ್.ಎಸ್.ಬೋಸರಾಜು ಸೇರಿದಂತೆ ಕಾಂಗ್ರೆಸ್‌ನ ಎಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದು ಪ್ರಕಟನೆ ತಿಳಿಸಿದೆ. ಈ ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ನಡೆಯಲಿದ್ದು, ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರದ ರಚನೆಗೆ ಹಕ್ಕು ಮಂಡಿಸಲಿದ್ದಾರೆ.

<><><><>

ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ದೆಹಲಿಗೆ ತೆರಳಿರುವ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಕ್ಷದ ವರಿಷ್ಠರನ್ನು ಭೇಟಿ ಮಾಡಿದ್ದಾರೆ. ದೆಹಲಿಯಲ್ಲಿ ಸೋನಿಯಾ ಗಾಂಧಿಯವರ ನಿವಾಸಕ್ಕೆ ತೆರಳಿದ ಅವರು, ಸೋನಿಯಾಗಾಂಧಿ ಹಾಗೂ ರಾಹುಲ್ ಗಾಂಧಿಯವರನ್ನು ಭೇಟಿಯಾಗಿ ಈವರೆಗೂ ತಮಗೆ ನೀಡಿದ ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ. ಬಳಿಕ, ಸಿದ್ದರಾಮಯ್ಯ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದರು. ಇದೇ ವೇಳೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರನ್ನು

ಭೇಟಿ ಮಾಡಿ ಚರ್ಚೆ ನಡೆಸಿದರು. ಬಳಿಕ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಸಚಿವ ಕೆ.ಜೆ.ಜಾರ್ಜ್ ಅವರ ಜೊತೆಗೂ ಕೆಲ ಹೊತ್ತು ಮಾತುಕತೆ ನಡೆಸಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆ ಅಂಗೀಕಾರವಾದ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಸಿದ್ದರಾಮಯ್ಯ ಅವರ ಸಾಧನೆಯನ್ನು ಮಾಜಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೊಂಡಾಡಿದ್ದಾರೆ. ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅತ್ಯಂತ ಪ್ರಭಾವಶಾಲಿ ಹಾಗೂ ದೀರ್ಘಾವಧಿ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಜನಮಾನಸದಲ್ಲಿ ನೆಲೆಸಿದ್ದಾರೆ ಎಂದು ತಿಳಿಸಿದ್ದಾರೆ. 'ದೇವರು ವರನು ಕೊಡಲ್ಲ, ಶಾಪನೂ ಕೊಡಲ್ಲ, ಅವಕಾಶ ಮಾತ್ರ ಕೊಡುತ್ತಾನೆ' ಕೊಟ್ಟಿರುವ ಅವಕಾಶದಲ್ಲಿ ಏನೂ ಸಾಧನೆ ಮಾಡುತ್ತೇವೆ ಎಂಬುದು ಮುಖ್ಯ. ಇದಕ್ಕೆ ಅತ್ಯುತ್ತಮ ಉದಾಹರಣೆ ಸಿದ್ದರಾಮಯ್ಯನವರು ಎಂದು ಅಭಿಪ್ರಾಯಪಟ್ಟಿದ್ದಾರೆ. ಜನಪರ ಯೋಜನೆಗಳಿಂದ ಹಿಡಿದು ರಾಜ್ಯದಲ್ಲಿ ವಿವಿಧ ಕ್ಷೇತ್ರಗಳ ಅಭಿವೃದ್ಧಿಗೆ ಅವರು ನೀಡಿದ ಕೊಡುಗೆ ಅವಿಸ್ಮರಣೀಯ. ಅವರ ಆಡಳಿತದಲ್ಲಿ ಸಚಿವನಾಗಿ ಉಪಮುಖ್ಯಮಂತ್ರಿಯಾಗಿ ಮಾರ್ಗದರ್ಶನ ಪಡೆದುಕೊಂಡಿದ್ದು ನನ್ನ ಭಾಗ್ಯ ಎಂದು ತಿಳಿಸಿದ್ದಾರೆ. ರಾಜ್ಯದ ಪ್ರಗತಿಗಾಗಿ ನಾವೆಲ್ಲರೂ ಒಟ್ಟಾಗಿ ನಡೆಯೋಣ ಎಂದು ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.

<><><>

ರಾಜ್ಯದ ಮೊದಲ ತಾಂತ್ರಿಕ ಕಾಲೇಜು ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿರುವ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಂಗಸಂಸ್ಥೆಯಾದ  ದಾವಣಗೆರೆಯ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದ ಅಮೃತ ಮಹೋತ್ಸವ ಕಾರ್ಯಕ್ರಮವನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ನಿರ್ಮಲಾನಂದನಾಥ ಸ್ವಾಮೀಜಿ, ಮಾಜಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್, ಡಾ.ಎಂ.ಸಿ.ಸುಧಾಕರ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಇದಕ್ಕೂ ಮೊದಲು ಉಪರಾಷ್ಟ್ರಪತಿಯವರು ಬೆಂಗಳೂರಿನಲ್ಲಿ ನಡೆದ ಆರ್ಟ್ ಆಫ್ ಲೀವಿಂಗ್ ಅಂತಾರಾಷ್ಟ್ರೀಯ ಕೇಂದ್ರದ ೪೫ನೇ ವಾರ್ಷಿಕೋತ್ಸವ ಸಮಾರಂಭವನ್ನುದ್ದೇಶಿಸಿ ಮಾತನಾಡಿ, ಭಕ್ತಿ ಎಂದರೆ ನಮ್ಮ ಬಗ್ಗೆ, ನಮ್ಮ ಕುಟುಂಬ, ನಮ್ಮ ಸಮಾಜ, ರಾಷ್ಟ್ರ ಮತ್ತು ಒಟ್ಟಾರೆಯಾಗಿ ಮಾನವ ಕುಲದ ಸಮರ್ಪಣೆ ಎಂದು ತಿಳಿಸಿದರು. ಜೀವನದ ಪ್ರತಿಯೊಂದು ಕ್ಷಣವನ್ನು ಆನಂದಿಸುವುದು ಒಂದು ಕಲೆ ಎಂದು ಹೇಳಿದರು. ಧ್ಯಾನ, ಜ್ಞಾನ, ಗಾನ ನಮ್ಮ ಜೀವನ ಮತ್ತು ವ್ಯಕ್ತಿತ್ವವನ್ನು ಶ್ರೀಮಂತಗೊಳಿಸುತ್ತದೆ ಎಂದು ಅಭಿಪ್ರಾಯಪಟ್ಟರು.

<><><>

ಇತ್ತೀಚೆಗೆ ಭಟ್ಕಳದಲ್ಲಿ  ನಡೆದ ಕಪ್ಪೆ ಚಿಪ್ಪು ದುರಂತದಲ್ಲಿ ಮೃತಪಟ್ಟ ಹನ್ನೊಂದು ಮಂದಿಯ ಕುಟುಂಬಕ್ಕೆ ಪರಿಹಾರ ಧನವನ್ನು ಮಾಜಿ ಸಚಿವ ಮಂಕಾಳ ವೈದ್ಯ ಇಂದು ವಿತರಿಸಿದರು. ರಾಜ್ಯ ಸರ್ಕಾರವು  ತಲಾ ೫ ಲಕ್ಷ ರೂಪಾಯಿಯಂತೆ  ಒಟ್ಟು  ೫೫ ಲಕ್ಷ ರೂಪಾಯಿ ಹಾಗೂ ಮೀನುಗಾರಿಕೆ ಇಲಾಖೆಯಿಂದ ತಲಾ ೧೦ ಲಕ್ಷದಂತೆ ೧೧ ಕುಟುಂಬದದವರಿಗೆ ಒಟ್ಟು ೧ ಕೋಟಿ ೧೦ ಲಕ್ಷ ರೂಪಾಯಿಯನ್ನು ಘೋಷಿಸಿತ್ತು.  ಈ  ಎಲ್ಲಾ ಪರಿಹಾರದ ಚೆಕ್ ಗಳನ್ನು ಇಂದು ಬೆಳಗ್ಗೆ ಸಂತ್ರಸ್ತರ ಮನೆಗಳಿಗೆ ತೆರಳಿ ಮಂಕಾಳ ವೈದ್ಯ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

<><><>

ಮಾಜಿ ಸಚಿವ ವೆಂಕಟರಮಣಪ್ಪ ಹೃದಯಘಾತದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದಾರೆ. ವೆಂಕಟರಮಣಪ್ಪ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಮಾಜಿ ಸಚಿವ ಡಾ.ಜಿ.ಪರಮೇಶ್ವರ್

ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಶಿವರಾಜ್ ತಂಗಡಗಿ, ಶಾಸಕ ಹೆಚ್.ವಿ.ವೆಂಕಟೇಶ್ ಉಪಸ್ಥಿತರಿದ್ದರು. ಬಳಿಕ ಮಾತನಾಡಿದ, ಮಾಜಿ ಸಚಿವ ಡಾ.ಜಿ.ಪರಮೇಶ್ವರ್, ವೆಂಕಟರಮಣಪ್ಪ ಅವರು ತುಮಕೂರು ಜಿಲ್ಲೆಯಲ್ಲಿ ಹೋರಾಟ ಮಾಡಿ, ಜನಪ್ರಿಯತೆ ಗಳಿಸಿದ ಶೋಷಿತ ವರ್ಗದ ನಾಯಕ. ಅವರ ಅಗಲಿಕೆಯು ಕಾಂಗ್ರೆಸ್ ಪಕ್ಷಕ್ಕೆ ತುಂಬಲಾಗದ ನಷ್ಟವಾಗಿದೆ ಎಂದು ತಿಳಿಸಿದರು.

<><><><>

ಜೇನು ಪೆಟ್ಟಿಗೆಯನ್ನು ಮಾವಿನ ತೋಟದಲ್ಲಿ ಅಳವಡಿಸಿಕೊಂಡು ದುಬೈಗೆ ಮಾವಿನ ಹಣ್ಣು ರಫ್ತು ಮಾಡುವ ಮೂಲಕ ಜೇನು ಕೃಷಿ ಮಾಡಿದ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ನಿಲೋಗಲ್ಲ ಗ್ರಾಮದ ರೈತ ಶ್ರೀನಿವಾಸ ಜೇನು ಕೃಷಿಯಲ್ಲಿ ಮಾದರಿಯಾಗಿದ್ದಾರೆ. ಜೇನು ತುಪ್ಪಕ್ಕೆ ಉತ್ತಮ ಬೆಲೆಯ ಜೊತೆಗೆ ಜೇನುನೊಣಗಳ ಪರಾಗಸ್ಪರ್ಶದಿಂದ ಮಾವಿನ ಇಳುವರಿ ಹೆಚ್ಚಿಸಿಕೊಳ್ಳುವ ವಿಧಾನ ಇತರ ರೈತರಿಗೆ ಮಾದರಿಯಾಗಿದೆ. ನೈಸರ್ಗಿಕ ಕೃಷಿಯಲ್ಲಿ ಮಾವಿನ ಹಣ್ಣಿನ ಗಿಡಗಳನ್ನು ಬೆಳಸಿದ್ದು ಹಣ್ಣುಗಳು ಹೆಚ್ಚಿನ ಸಿಹಿ ಮತ್ತು ಋಚಿಯಾಗಿರಲು ಕಾರಣವಾಗಿದೆ. ಸಾವಯವ ಪದ್ದತಿಯಲ್ಲಿ ಮಾವು ಬೆಳೆಯುತ್ತಿದ್ದು ಇಳುವರಿ ಕಡಿಮೆಯಾಗುವ ಸಂದರ್ಭದಲ್ಲಿ ಜೇನು ಪೆಟ್ಟಿಗೆಯನ್ನು ತೋಟದಲ್ಲಿ ಅಳವಡಿಸಿಕೊಂಡಿದ್ದರಿಂದ ಗಿಡದಲ್ಲಿ ಮಾವಿನ ಎಲೆಗಿಂತ ಕಾಯಿಗಳು ಅಧಿಕವಾಗಿವೆ ಇದಕ್ಕೆ ಕಾರಣ ಜೇನುನೊಣಗಳ ಪರಾಗಸ್ಪರ್ಶ ಎಂದು ರೈತ ಶ್ರೀನಿವಾಸ ಜಾಲಿಹಾಳ ತಿಳಿಸಿದ್ದಾರೆ.

**ಧ್ವನಿ : ಶ್ರೀನಿವಾಸ ಜಾಲಿಹಾಳ ಜೇನು ಕೃಷಿಕರು**

<><><><>

ಹಾವೇರಿ ಜಿಲ್ಲೆಗೆ ಪ್ರಸಕ್ತ ಸಾಲಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ೫.೮೧ ಲಕ್ಷ ಮಾನವ ದಿನಗಳ ಸೃಜನೆಗೆ ಗುರಿ ನೀಡಲಾಗಿದೆ. ಈಗಾಗಲೇ ಸುಮಾರು ೧.೯೭ ಲಕ್ಷ ಮಾನವ ದಿನಗಳ ಸೃಜನೆ ಮಾಡಲಾಗಿದ್ದು, ಶೇಕಡ ೩೩.೭೩ ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಲ್ಜೀತ್ ಕುಮಾರ್ ತಿಳಿಸಿದ್ದಾರೆ. ಹಾವೇರಿ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟಾರೆ ೪೨ ಸಾವಿರ ೧೩೯ ಜನರ ಉದ್ಯೋಗ ಬೇಡಿಕೆ ಸಲ್ಲಿಸಿದ್ದು, ೪೦ ಸಾವಿರ ೫೦೧ ಜನರಿಗೆ ಉದ್ಯೋಗ ಹಂಚಿಕೆ ಮಾಡಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>